ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಡಿಜೆ - ಬೆಂಗಳೂರು ಗಲಭೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ     ದಿನಾಂಕ : DATE : 14/10/20

# ಶಾಸಕರ ಹತ್ಯೆಗೆ ನಡೆದಿತ್ತು ಸಂಚು?

## ಡಿ.ಜೆ. ಹಳ್ಳಿ ಗಲಭೆ ಪ್ರಕರಣ | ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖ

14-10-2020

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಡಿ.ಜೆ. ಹಳ್ಳಿ, ಕೆ.ಜಿ. ಹಳ್ಳಿ ಗಲಭೆ ಹಿಂದೆ ಶಾಸಕ ಅಖಂಡ ಶ್ರೀನಿವಾಸಮೂರ್ತಿ ಹತ್ಯೆಗೆ ಸಂಚು ನಡೆದಿತ್ತೇ ಎಂಬ ಬಗ್ಗೆ ಅನುಮಾನಗಳು ವ್ಯಕ್ತವಾಗಿದೆ. ಸಿಸಿಬಿ ಪೊಲೀಸರು ನ್ಯಾಯಾಲಯಕ್ಕೆ ಸಲ್ಲಿಸಿದ ಮಧ್ಯಂತರ ದೋಷರೋಪ ಪಟ್ಟಿಯಲ್ಲಿ ಈ ಸ್ಫೋಟಕ ಸಂಗತಿಗೆ ಸಂಬಂಧಿಸಿದ ಕೆಲ ರಹಸ್ಯ ಉಲ್ಲೇಖಿಸಿದ್ದಾರೆ ಎನ್ನಲಾಗುತ್ತಿದೆ.

**» ಸಂಪತ್ ರಾಜ್ ಹೆಸರು ತಳುಕು**

ಇಡೀ ಗಲಭೆಯ ಹಿಂದೆ ಎಸ್‌ಡಿಪಿಐ ಮುಖಂಡ ಮುಜಾಮಿಲ್, ಮಾಜಿ ಮೇಯರ್ ಸಂಪತ್‌ರಾಜ್, ಅವರ ಆಪ್ತ ಅರುಣ್ ರಾಜ್, ಮಾಜಿ ಕಾರ್ಪೊರೇಟರ್ ಅಬ್ದುಲ್ ರಕೀಬ್ ಜಾಕೀರ್ ಹೆಸರು ತಳುಕು ಹಾಕಿಕೊಂಡಿದೆ. ಇವರೇ ಹಣಕಾಸಿನ ನೆರವು ನೀಡಿದ್ದರು ಎಂಬ ಮಾತು ಕೇಳಿಬಂದಿದೆ.

ಆ.5ರಂದು ಅನ್ಸಿನ್ ಮೊಹಲ್ಲಾ ಬಳಿ ರಹಸ್ಯ ಸಭೆ ನಡೆಸಲಾಗಿತ್ತು. ಈ ಸಭೆಯಲ್ಲಿ ಅಖಂಡ ಶ್ರೀನಿವಾಸಮೂರ್ತಿ ಹತ್ಯೆಗೆ ಸಂಚು ನಡೆದಿತ್ತು. ಆ.6ರಂದು ಶಾಸಕರ ವಿರುದ್ಧ ಪ್ರತಿಭಟನೆಗೆ ಯೋಜನೆ ರೂಪಿಸಲಾಗಿತ್ತು. ಆದರೆ, ಪೊಲೀಸರು ಅನುಮತಿ ನೀಡಿರಲಿಲ್ಲ. ಆ.10ರಂದು ಮತ್ತೊಮ್ಮೆ ಪ್ರತಿಭಟನೆಗೆ ತಯಾರಿ ನಡೆಸಿದ್ದರೂ ಪೊಲೀಸರು ಅನುಮತಿ ನೀಡಿರಲಿಲ್ಲ. ಅಂತಿಮ ವಾಗಿ ನವೀನ್ ಫೇಸ್‌ಬುಕ್ ಪೋಸ್ಟ್ ಹೆಸರಿನಲ್ಲಿ ಗಲಾಟೆ ನಡೆಸಲು ನಿರ್ಧರಿಸಿದ್ದರು. ಅಖಂಡ ಶ್ರೀನಿವಾಸಮೂರ್ತಿ ಹೆಸರು ಹಾಳು ಮಾಡುವ ಉದ್ದೇಶದಿಂದ ನಡೆದ ಪೂರ್ವನಿಯೋಜಿತ ಸಂಚು ಎನ್ನಲಾಗುತ್ತಿದೆ.



ಪ್ರಮುಖ ಆರೋಪಿಗಳ ಬಂಧನಕ್ಕೆ ಒತ್ತಾಯಿಸಿ ಶಾಸಕ ಅಖಂಡ ಶ್ರೀನಿವಾಸಮೂರ್ತಿ ಬೆಂಬಲಿಗರು ಮಂಗಳವಾರ ಪ್ರತಿಭಟಿಸಿದರು.

### ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ಆಗಬೇಕು

ನಮ್ಮ ಕ್ಷೇತ್ರದಲ್ಲಿರುವ 7 ಜನ ಕಾರ್ಪೊರೇಟರ್‌ಗಳ ಜತೆಯಲ್ಲೇ ಕೆಲಸ ಮಾಡುತ್ತಿದ್ದೆವು. ನಾನು ದ್ವೇಷದ ರಾಜಕಾರಣ ಮಾಡಿಲ್ಲ.



ಈ ರೀತಿ ಮಾಡಿರುವುದರಿಂದ ನನಗೆ ನೋವಾಗಿದೆ. ತಪ್ಪಿತಸ್ಥರು ಯಾರೇ ಇದ್ದರೂ ಶಿಕ್ಷೆಯಾಗಬೇಕು. ಯಾರೋ ಬೇಕಂತಲೇ ಕಿಡಿಗೇಡಿಗಳು ಮಾಡಿರುವ ಕೆಲಸ ಅಂದುಕೊಂಡಿದ್ದೆ. ನನ್ನ ಮೇಲೆ ಏನೇ ದ್ವೇಷ ಇದ್ದರೂ ಪಕ್ಷದ ನಾಯಕರಾದ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಹಾಗೂ ಇತರರ ಜತೆ ಹೇಳಬಹುದಿತ್ತು. ಈ ರೀತಿಯ ಕೆಲಸ ಮಾಡುತ್ತಾರೆ ಎಂದುಕೊಂಡಿರಲಿಲ್ಲ ಎಂದು ಅಖಂಡ ಶ್ರೀನಿವಾಸಮೂರ್ತಿ ಪ್ರತಿಕ್ರಿಯಿಸಿದ್ದಾರೆ.